# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 766
ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ.
ಉತ್ತರಿಸಬೇಕಾದ ದಿನಾಂಕ : 17-09-2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ಸಹ ಶಿಕ್ಷಕರಿಗೆ ಕುಮಾರ್ ನಾಯಕ್ ವರದಿಯನ್ವಯ ವಿಶೇಷ ಬಡ್ತಿ ನೀಡುವ ಪ್ರಸ್ತಾವನೆ ಎಂದಿನಿಂದ ಜಾರಿಯಲ್ಲಿರುತ್ತದೆ; (ಪ್ರಸ್ತಾವನೆಯ ವಿವರಗಳನ್ನು ಒದಗಿಸುವುದು.) | ಸರ್ಕಾರದ ಆದೇಶ ಸಂಖ್ಯೆ ಇಡಿ 78 ಎಸ್ ಎಲ್ ಬಿ 2016, ದಿನಾಂಕ: 15.04.2016 ರನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರಾಗಿರುವ ಹೆಚ್ಚುವರಿ ವೇತನ ಬಡ್ತಿಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೂ ಮಂಜೂರು ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಆರ್ಥಿಕ ಇಲಾಖೆಯು ಒಪ್ಪಿರುವುದಿಲ್ಲ. |
| ಆ) | ಈ ವಿಶೇಷ ವೇತನ ಬಡ್ತಿ ನೀಡಲು ಇರುವ ಸಮಸ್ಯೆಗೆ ಕಾರಣಗಳೇನು ; ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಪ್ರಸ್ತಾವನೆ ಸಹಿತ ವಿವರಗಳನ್ನು ಒದಗಿಸುವುದು) | |
| ಇ) | ವಿಶೇಷ ವೇತನ ಬಡ್ತಿ ನೀಡುವಂತೆ ನ್ಯಾಯಾಲಯದ ಆದೇಶಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ಕುರಿತು ತೆಗೆದುಕೊಂಡ ಕ್ರಮಗಳೇನು? (ನ್ಯಾಯಾಲಯಗಳ ಆದೇಶದ ಪ್ರತಿ ಹಾಗೂ ಆದೇಶದನ್ವಯ ತೆಗೆದುಕೊಂಡ ಕ್ರಮಗಳ ಕುರಿತು ಸಂಪೂರ್ಣ ಮಾಹಿತಿ ನೀಡುವುದು). | ಹೌದು.<br>ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ.<br>ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠ ರಿಟ್ ಪಿಟಿಷನ್ ಸಂಖ್ಯೆ 102821-102825 of 2018 (S-RES) ದಿನಾಂಕ: 20.04.2018 ರಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಂದ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಹಶಿಕ್ಷಕರುಗಳಿಗೆ ವಿಶೇಷ ವೇತನ ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ತಿಳಿಸಲಾಗಿದೆ. |

ಸಂಖ್ಯೆ: ಸಕಇ 388 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು